**ಅಸಲು ದಾವೆ ಸಂ.13/14** **ಪಿಡಬ್ಲ್ಯೂ -1**

**<u>ದಿನಾಂಕ 11-08-2025 ರಂದು ಸಾಕ್ಷಿಯನ್ನು ಕರೆಯಿಸಿ ಮುಖ್ಯ ವಿಚಾರಣೆಗೆ ಪ್ರಮಾಣ ವಚನವನ್ನು ಬೋಧಿಸಲಾಯಿತು.</u>**

**<u>ಮುಖ್ಯ ವಿಚಾರಣೆಃ ವಾದಿ ಪರ ವಕೀಲರಿಂದಃಃ</u>**

ನಾನು ಒಟ್ಟು ಮುಕ್ತಿಯಾರ್ ಪತ್ರದ ಮುಖಾಂತರ ವಾದಿ ಪರವಾಗಿ ಸಾಕ್ಷ್ಯ ನುಡಿಯಲು ಬಂದಿದ್ದು, ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಹಾಜರು ಮಾಡಿದ್ದು, ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳನ್ನು ನಾನೇ ಹೇಳಿ ಬರೆಯಿಸಿ ತಿಳಿದುಕೊಂಡಿರುತ್ತೇನೆ ಹಾಗೂ ಈ ಪ್ರಮಾಣ ಪತ್ರದಲ್ಲಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ ಎಂದು ಪ್ರಮಾಣ ಮಾಡಿ ಸಹಿ ಮಾಡಿರುತ್ತೇನೆ.

ವಾದಿ ಈಗಾಗಲೇ ದಾಖಲಾತಿಗಳನ್ನು ನ್ಯಾಯಾಲಯಕ್ಕೆ ಹಾಜರು ಪಡಿಸಿದ್ದು, ಅವುಗಳನ್ನು ನಾನು ನೋಡಿ ಗುರುತಿಸಿದ್ದು, ನಂತರ ಈ ಕೆಳಕಂಡಂತೆ ದಾಖಲಾತಿಗಳನ್ನು ಗುರುತಿಸಲಾಯಿತು.

ಸಾಕ್ಷಿಯು ಒಟ್ಟು ಮುಕ್ತಿಯಾರ್ ಪತ್ರವನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-1 ಎಂದು, ಸಾಕ್ಷಿಯು ಮ್ಯುಟೇಶನನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-2 ಎಂದು, ಸಾಕ್ಷಿಯು ಪಹಣಿ ಪತ್ರಿಕೆಯನ್ನು ನೋಡಿ ಗುರುತಿಸಿದ್ದು, ಅವುಗಳನ್ನು ನಿಪಿ-3 ಎಂದು ಗುರುತಿಸಲಾಯಿತು.

ಆದ್ದರಿಂದ ದಾವೆಯನ್ನು ಪುರಸ್ಕರಿಸಬೇಕೆಂದು ಕೋರಿರುತ್ತಾರೆ.

**<u>ಪ್ರತಿವಾದಿ ಏಕತರ್ಫಿಯಾಗಿರುವುದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.</u>**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು).**

**ಓ ಹೇ ಕೇ ಸ ಇದೆ.**

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಸಿಂಧನೂರು.